16)

# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 475
ಉತ್ತರಿಸಬೇಕಾದ ದಿನಾಂಕ : 10.12.2020
ಸದಸ್ಯರ ಹೆಸರು : ಶ್ರೀಮತಿ ವೀಣಾ ಅಚ್ಚಯ್ಯ
ಉತ್ತರಿಸುವ ಸಚಿವರು : ಮಾನ್ಯಮುಖ್ಯಮಂತ್ರಿಯವರು

| ಕ್ರಸ | ಪ್ರಶ್ನೆ | ಉತ್ತರ |
|---|---|---|
| ಅ) | ಕೊಡಗು ಜಿಲ್ಲೆಯ ಮಡಿಕೇರಿ ನಗರದಲ್ಲಿರುವ ಜನರಲ್ ತಿಮ್ಮಯ್ಯ ಜಿಲ್ಲಾ ಕ್ರೀಡಾಂಗಣವನ್ನು ಸೂಕ್ತ ನಿರ್ವಹಣೆ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಕೊಡಗು ಜಿಲ್ಲೆಯ ಮಡಿಕೇರಿ ನಗರದಲ್ಲಿರುವ ಜನರಲ್ ತಿಮ್ಮಯ್ಯ ಜಿಲ್ಲಾ ಕ್ರೀಡಾಂಗಣವನ್ನು ಇಲಾಖಾ ವತಿಯಿಂದ ಜಿಲ್ಲಾ ಪಂಚಾಯತ್ ವಲಯದಲ್ಲಿ ಲಭ್ಯವಿರುವ ಅನುದಾನದಿಂದ ನಿರ್ವಹಣೆ ಮಾಡಲಾಗುತ್ತಿದೆ. |
| ಆ) | ಸದರಿ ಕ್ರೀಡಾಂಗಣದ, ಒಳಾಂಗಣ ಹಾಗೂ ಹೊರಾಂಗಣದ ಸುಸಜ್ಜಿತ ನಿರ್ವಹಣೆಗೆ ಸರ್ಕಾರ ನೀಡುತ್ತಿರುವ ಅನುದಾನ ಎಷ್ಟು (ವಿವರ ನೀಡುವುದು) | ಕೊಡಗು ಜಿಲ್ಲೆಯ ಮಡಿಕೇರಿ ನಗರದಲ್ಲಿರುವ ಜನರಲ್ ತಿಮ್ಮಯ್ಯ ಜಿಲ್ಲಾ ಕ್ರೀಡಾಂಗಣವನ್ನು ಒಳಗೊಂಡು ಮಡಿಕೇರಿ ಜಿಲ್ಲೆಯ ಇಲಾಖೆಯ ಅಧೀನದಲ್ಲಿರುವ ಎಲ್ಲಾ ಕ್ರೀಡಾಂಗಣಗಳನ್ನು ನಿರ್ವಹಣೆ ಮಾಡಲು ಜಿಲ್ಲಾ ಪಂಚಾಯತ್ ವಲಯದಿಂದ ಕಳೆದ ಮೂರು ವರ್ಷಗಳಿಂದ ಬಿಡುಗಡೆ ಮಾಡಿದ ಅನುದಾನ ಕೆಳಕಂಡಂತಿದೆ:-<br>2017-18- ರೂ.40.00 ಲಕ್ಷಗಳು.<br>2018-19- ರೂ.50.00 ಲಕ್ಷಗಳು.<br>2019-20- ರೂ.70.00 ಲಕ್ಷಗಳು |
| ಇ) | ಪ್ರಸಕ್ತ ಆರ್ಥಿಕ ವರ್ಷದಿಂದ ಸರ್ಕಾರ ಇನ್ನೂ ಹೆಚ್ಚು ಅನುದಾನ ನೀಡಿ, ಸೂಕ್ತ ನಿರ್ವಹಣೆ ಮಾಡಲು ಕ್ರಮ ಕೈಗೊಳ್ಳುವುದೇ? | ಈಗಾಗಲೇ ಅಗತ್ಯ ಅನುದಾನದೊಂದಿಗೆ ಕೊಡಗು ಜಿಲ್ಲೆಯ ಮಡಿಕೇರಿ ನಗರದಲ್ಲಿರುವ ಜನರಲ್ ತಿಮ್ಮಯ್ಯ ಜಿಲ್ಲಾ ಕ್ರೀಡಾಂಗಣವನ್ನು ನಿರ್ವಹಣೆ ಮಾಡಲಾಗುತ್ತಿದೆ. |

ವೈಎಸ್‌ಡಿ- ಇಬಿಬಿ/125/2020

(ಬಿ. ಎಸ್.ಯಡಿಯೂರಪ್ಪ)
ಮುಖ್ಯಮಂತ್ರಿ.